**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಿವಕುಮಾರ್.ಕೆ ಇವರ ನಿಯಮ-330 ರ ಸೂಚನೆಗೆ ಉತ್ತರ**

**ವಿಷಯ:** ರಾಜ್ಯದ ಪೂರ್ವ ಮತ್ತು ಉತ್ತರ ಭಾಗದ ಗಡಿ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು (ಪಾವಗಡ, ಮುಧುಗಿರಿ, ಶಿರಾ), ಚಿತ್ರದುರ್ಗ (ಮೊಳಕಾಲ್ಮೂರು), ಜಿಲ್ಲೆಗಳ ಗಡಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಪರಿಸ್ಥಿತಿ ಅತ್ಯಂತ ಶೋಚನೀಯವಾಗಿದ್ದು, ಈ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟವು 1000-1500 ಅಡಿಗಳಿಗಿಂತಲೂ ಕೆಳಕ್ಕೆ ಕುಸಿದಿರುವುದರಿಂದ, ಆಂಧ್ರ ಸರ್ಕಾರದ ಮನವೊಲಿಸಿ ಕರ್ನಾಟಕಕ್ಕೆ ಕೃಷ್ಣಾ ನದಿಯಲ್ಲಿ ಹಂಚಿಕೆಯಾಗಿರುವ ನೀರಿನ ಪಾಲನ್ನು ಬಳಸಿಕೊಂಡು, ಆಂದ್ರಪ್ರದೇಶದ ಗಡಿ ಭಾಗದ ಕಾಲುವೆಗಳ ಮೂಲಕ ನಮ್ಮ ರಾಜ್ಯದ ಪಾವಗಡ, ಬಾಗೇಪಲ್ಲಿ, ಮುಳಬಾಗಿಲು ಮುಂತಾದ ತಾಲ್ಲೂಕುಗಳಿಗೆ ಕುಡಿಯುವ ನೀರನ್ನು ಒದಗಿಸುವ ಕುರಿತು.

*****

ಅ) ಕರ್ನಾಟಕ ರಾಜ್ಯದ ಪೂರ್ವ ಮತ್ತು ಉತ್ತರ ಭಾಗದ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳ ಗಡಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಪರಿಸ್ಥಿತಿ ಮತ್ತು ಅಂತರ್ಜಲ ಮಟ್ಟವು ಕುಸಿದಿರುವುದನ್ನು ಸರ್ಕಾರವು ಗಮನಿಸಿದ್ದು, ಇದರ ಪರಿಹಾರಕ್ಕಾಗಿ ಈಗಾಗಲೇ ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಂಡಿರುತ್ತದೆ.

1. ಪಾವಗಡ ಬಹುಗ್ರಾಮ ಗ್ರಾಮೀಣ ನೀರು ಸರಬರಾಜು ಯೋಜನೆಯಡಿಯಲ್ಲಿ ತುಮಕೂರು ಜಿಲ್ಲೆಯ ಪಾವಗಡ ಪಟ್ಟಣ, ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ಪಟ್ಟಣ ಹಾಗೂ ತುಮಕೂರು, ಚಿತ್ರದುರ್ಗ ಮತ್ತು ವಿಜಯನಗರ ಜಿಲ್ಲೆಗಳ ಒಟ್ಟು 1138 ಗ್ರಾಮಗಳಿಗೆ ಕುಡಿಯುವ ನೀರನ್ನು ಪೂರೈಸಲು ತುಂಗಭದ್ರಾ ಜಲಾಶಯದಿಂದ 2.30 ಟಿಎಂಸಿ ನೀರನ್ನು ಬಳಸಲು ಜಲ ಸಂಪನ್ಮೂಲ ಇಲಾಖೆಯಿಂದ ಅನುಮೋದಿಸಿದ್ದು, ಅದರನ್ವಯ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

2. ಭದ್ರಾ ಮೇಲ್ದಂಡೆ ಯೋಜನೆಯಿಂದ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ, ಹೊಳಲ್ಕೆರೆ, ಹಿರಿಯೂರು, ಚಿತ್ರದುರ್ಗ, ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕುಗಳ ಒಟ್ಟು 1,54,245 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಮತ್ತು 160 ಕೆರೆಗಳನ್ನು ತುಂಬಿಸಲು ಹಾಗೂ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ, ಶಿರಾ ಮತ್ತು ಪಾವಗಡ ತಾಲ್ಲೂಕುಗಳ 19,215 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಹಾಗೂ 90 ಕೆರೆಗಳನ್ನು ತುಂಬಿಸಲು ಯೋಜಿಸಲಾಗಿದೆ. ಸದರಿ ಯೋಜನೆಯಡಿಯಲ್ಲಿ ಒಟ್ಟಾರೆ 29.90 ಟಿಎಂಸಿ ನೀರನ್ನು ಬಳಸಲು ಉದ್ದೇಶಿಸಲಾಗಿದ್ದು, ಈ ಎರಡು ಜಿಲ್ಲೆಗಳ ನೀರಾವರಿ ಬಳಕೆಗಾಗಿ 17.70 ಟಿಎಂಸಿ ನೀರು ಹಂಚಿಕೆಯಾಗಿದೆ. ಸದರಿ ಯೋಜನೆಯು ತೀವ್ರ ಪ್ರಗತಿಯಲ್ಲಿರುತ್ತದೆ. ಸದರಿ ಯೋಜನೆಯನ್ನು ರಾಷ್ಟ್ರೀಯ ಯೋಜನೆಯಡಿಯಲ್ಲಿ ಪರಿಗಣಿಸಿ ಅಗತ್ಯವಿರುವ ಆರ್ಥಿಕ ನೆರವನ್ನು ಒದಗಿಸಲು ಕೇಂದ್ರ ಸರ್ಕಾರವನ್ನು ಕೋರಲಾಗಿದ್ದು, ಅಗತ್ಯ ಕ್ರಮವಹಿಸಲಾಗುತ್ತಿದೆ.

3. ಎತ್ತಿನಹೊಳೆ ಯೋಜನೆಯಲ್ಲಿ ಉಪಯೋಗಿಸಲು ಉದ್ದೇಶಿಸಲಾಗಿರುವ 24 ಟಿಎಂಸಿ ನೀರಿನಲ್ಲಿ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ತುಮಕೂರು ಜಿಲ್ಲೆಗಳಿಗೆ ಕೆರೆ ತುಂಬಿಸಲು ಹಾಗೂ ಕುಡಿಯುವ ನೀರಿನ ಪೂರೈಕೆಗಾಗಿ ಕ್ರಮವಾಗಿ 5.0 ಟಿಎಂಸಿ, 5.0 ಟಿಎಂಸಿ ಹಾಗೂ 5.72 ಟಿಎಂಸಿ ನೀರನ್ನು ಒದಗಿಸಲಾಗಿದ್ದು, ಈ ಯೋಜನೆಯೂ ಸಹ ಪ್ರಗತಿಯಲ್ಲಿದೆ.

4. ಮುಂದುವರೆದು, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಅಂತರ್ಜಲ ಅಭಿವೃದ್ಧಿಗಾಗಿ ಬೆಂಗಳೂರು ನಗರದಿಂದ ಸಂಸ್ಕರಿಸಿದ ನೀರನ್ನು ಪ್ರಸ್ತುತ ಕೆ.ಸಿ.ವ್ಯಾಲಿ (3.61 ಟಿಎಂಸಿ) ಮತ್ತು ಹೆಚ್.ಎನ್.ವ್ಯಾಲಿ (1.80 ಟಿಎಂಸಿ) ಯೋಜನೆಗಳ ಮೂಲಕ 191 ಕೆರೆಗಳನ್ನು ತುಂಬಿಸಲು ಕ್ರಮಕೈಗೊಳ್ಳಲಾಗಿದೆ.

ಆ) ಆಂಧ್ರಪ್ರದೇಶವು ಕೃಷ್ಣಾ ನದಿಯ ಹೆಚ್ಚುವರಿ ನೀರಿನ ಬಳಕೆಗಾಗಿ ಕೈಗೊಂಡಿರುವ ಹಂದ್ರಿನೀವಾ ಸುಜಲ ಶ್ರವಂತಿ ಯೋಜನೆಯನ್ನು ರಾಜ್ಯದ ಗಡಿ ಪ್ರದೇಶದಲ್ಲಿ ಕೈಗೊಂಡಿದ್ದು, ಸದರಿ ಯೋಜನೆಯು ಅನಧಿಕೃತ ಯೋಜನೆಯಾಗಿದ್ದು, ನ್ಯಾಯಾಧಿಕರಣಗಳಿಂದ ಯಾವುದೇ ನಿರ್ದಿಷ್ಟ ನೀರಿನ ಹಂಚಿಕೆ ಇಲ್ಲದಿರುವುದರಿಂದ, ಇದರೊಂದಿಗೆ ಕೈಗೊಂಡಿರುವ ಇತರೆ ಅನಧಿಕೃತ ಯೋಜನೆಗಳನ್ನು ತಡೆಯುವಂತೆ ಒತ್ತಾಯಿಸಿ ರಾಜ್ಯವು ಕೇಂದ್ರ ಸರ್ಕಾರಕ್ಕೆ ಪತ್ರಗಳನ್ನು ಬರೆದಿರುತ್ತದೆ. ಈ ಹಿನ್ನೆಲೆಯಲ್ಲಿ ಈ ಯೋಜನೆಯಿಂದ ಕರ್ನಾಟಕಕ್ಕೆ ನೀರನ್ನು ಪಡೆಯಲು ಕಷ್ಟಸಾಧ್ಯವಾಗುತ್ತದೆ.

**ಸಂಖ್ಯೆ: ಜಸಂಇ 07 ಕೃವಿಇ 2026**

**(ಡಿ.ಕೆ. ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**